# ಕನ್ನಡ ಅಭಿವೃದ್ಧಿ ಪ್ರಾಧಿಕಾರ

ವಿಧಾನಸೌಧ, ಬೆಂಗಳೂರು

ಸಂಪಾದಕರು/ವರದಿಗಾರರು

ಪತ್ರಿಕಾ ಮತ್ತು ದೃಶ್ಯ ಮಾಧ್ಯಮ ದಿನಾಂಕ:26-08-2020

**:ಪ್ರಕಟಣೆಯ ಕೃಪೆಗಾಗಿ: (ಇಂದು ವಿಧಾನಸೌಧದಲ್ಲಿ ನಡೆದ ಕಾರ್ಯಕ್ರಮ)**

ಮಾನ್ಯರೆ,

## "ಕನ್ನಡಿಗರಿಗೇ ಉದ್ಯೋಗ ನೀಡಿ: ಟಿಎಸ್.ನಾಗಾಭರಣ"

## ನಮ್ಮ ಮೆಟ್ರೋದಲ್ಲಿ ನಡೆದ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷರ ತಾಕೀತು

ಬೆಂಗಳೂರು: ಕನ್ನಡ ನಾಡು-ನುಡಿ, ಸಂಸ್ಕೃತಿ ಹಾಗೂ ಕನ್ನಡದ ಸಾಹಿತಿಗಳ ಸಂದೇಶಗಳನ್ನು ಪ್ರಚುರಪಡಿಸುವ ಮೂಲಕ ಬೆಂಗಳೂರು ಮೆಟ್ರೋ, ಕನ್ನಡ ಭಾಷೆಯ ಒಂದು ವಾಹಕವಾಗಿ ಕೆಲಸ ಮಾಡಬೇಕೇ ವಿನಃ ಹಿಂದಿಯನ್ನು ಹೇರುವ ವಕ್ತಾರರಾಗಬಾರದು ಎಂದು **ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ** ಅವರು ಹೇಳಿದರು.

ಬೆಂಗಳೂರು ನಮ್ಮ ಮೆಟ್ರೋದಲ್ಲಿ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಜಾಲ ಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತುರ್ತು ಸಂದರ್ಭದಲ್ಲಿ ಬಳಸಲಾಗುವ ಬಾಗಿಲುಗಳ ಮೇಲೆ ಸಂಪೂರ್ಣವಾಗಿ ಹಿಂದಿಯನ್ನು ಬಳಸಿರುವ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ ಅಧ್ಯಕ್ಷರು, ಕನ್ನಡದ ಇತಿಹಾಸ, ಪರಂಪರೆ, ಸಂಗೀತ, ಸಾಹಿತ್ಯವನ್ನು ಉತ್ತುಂಗಕ್ಕೇರಿಸುವ ನಿಟ್ಟಿನಲ್ಲಿ ನಮ್ಮ ಮೆಟ್ರೋದ ಜವಾಬ್ದಾರಿಯೂ ಇದೆ. ಮೆಟ್ರೋದಲ್ಲಿ ಓಡಾಡುವವರು ಕನ್ನಡಿಗರೇ ಆಗಿದ್ದಾರೆ ಮತ್ತು ರಾಜ್ಯದೊಳಗೆ ಇರುವ ಯಾವುದೇ ಸಂಸ್ಥೆಯು ರಾಜ್ಯ ಸರ್ಕಾರದ ಭಾಷಾನೀತಿಯನ್ವಯ ಕಾರ್ಯನಿರ್ವಹಿಸುವುದು, ಈ ನೆಲದ ಕಾನೂನನ್ನು ಗೌರವಿಸುವುದು ಸಂಸ್ಥೆಯ ಕರ್ತವ್ಯ ಕೂಡ ಆಗಿದೆ ಎಂದು ಹೇಳಿದರು.

ಮೆಟ್ರೋ ಕಾಮಗಾರಿ ಸಂದರ್ಭದಲ್ಲಿ ಜಯದೇವ ಆಸ್ಪತ್ರೆ ಸಮೀಪದಲ್ಲಿ ಕನ್ನಡವನ್ನು ತಪ್ಪಾಗಿ ಬರೆಯಲಾಗಿದ್ದ ನಾಮಫಲಕವನ್ನು ಆನ್‌ಲೈನ್‌ನಲ್ಲಿ ಪ್ರದರ್ಶಿಸಿ, ಇವೆಲ್ಲ ಗೂಗಲ್ ಅನುವಾದದ ಅಚಾತುರ್ಯಗಳು. ಹೀಗೆ ಮಾಡುವುದರಿಂದ ಕನ್ನಡದ ನೆಲದಲ್ಲಿಯೇ ಕನ್ನಡವನ್ನು ಅವಮಾನಿಸಿದಂತಾಗುತ್ತದೆ. ಹಾಗಾಗಿ ಈ ನೆಲದಲ್ಲಿ ಸಾಕಷ್ಟು ಮಂದಿ ತಜ್ಞರು, ಅನುವಾದಕರು ಇದ್ದಾರೆ. ಅವರ ಸಲಹೆ ಪಡೆದು ನಾಮಫಲಕವನ್ನು ಅಳವಡಿಸುವಂತೆ ತಾಕೀತು ಮಾಡಿದರು.

## ಕನ್ನಡೀಗರಿಗೇ ಉದ್ಯೋಗ ನೀಡಿ:

ಮೆಟ್ರೋ ಸಂಸ್ಥೆಯಲ್ಲಿ ಬಹುಮುಖ್ಯವಾಗಿ ಸ್ವಚ್ಛತಾ ಸಿಬ್ಬಂದಿ ಮತ್ತು ಭದ್ರತಾ ಸಿಬ್ಬಂದಿಗಳು ಅನ್ಯರಾಜ್ಯದವರಿರುವ ಬಗ್ಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಾಕಷ್ಟು ದೂರುಗಳು ಬಂದಿವೆ. ಉತ್ತರ ಕರ್ನಾಟಕದವರು ಸೇರಿದಂತೆ ನಮ್ಮ ರಾಜ್ಯದ ಸಾಕಷ್ಟು ಮಂದಿ ಕೆಲಸವಿಲ್ಲದೆ ತೊಂದರೆಗೆ ಸಿಲುಕಿರುವಾಗ ನೀವು ಅನ್ಯರಾಜ್ಯದವರಿಗೆ ಕೆಲಸ ನೀಡುವುದು ಸರಿಯಲ್ಲ. ಹೊರಗುತ್ತಿಗೆ ನೌಕರರನ್ನು ಒದಗಿಸುವವರಿಗೆ ಕನ್ನಡಿಗರನ್ನೇ ಕರೆತರುವಂತೆ ಷರತ್ತು ವಿಧಿಸಬೇಕಿದೆ. ಯಾವುದೇ ಕಾರಣಕ್ಕೂ ಇನ್ನು ಮುಂದೆ ಹೀಗಾಗದಂತೆ ಎಚ್ಚರವಹಿಸಬೇಕು ಮತ್ತು ಕನ್ನಡದ ನೆಲದಲ್ಲಿ ಹಿಂದಿ ಹೇರಿಕೆಯನ್ನು ಕನ್ನಡಿಗರು ಎಂದಿಗೂ ಸಹಿಸುವುದಿಲ್ಲ ಎಂಬುದನ್ನು ತಾವು ಮನಗಾಣಬೇಕಿದೆ ಎಂದು ಬೆಂಗಳೂರು ಮೆಟ್ರೋದ ವ್ಯವಸ್ಥಾಪಕ ನಿರ್ದೇಶಕರಾದ ಅಜಯ್ ಸೇಠ್ ಅವರಿಗೆ ಎಚ್ಚರಿಕೆ ನೀಡಿದರು.

ಇದಕ್ಕೆ ಪ್ರತಿಕ್ರಿಯೆ ನೀಡಿದ **ಬೆಂಗಳೂರು ಮೆಟ್ರೋದ ವ್ಯವಸ್ಥಾಪಕ ನಿರ್ದೇಶಕರಾದ ಅಜಯ್ ಸೇಠ್ ಅವರು**, ಇನ್ನು ಮುಂದೆ ಯಾವುದೇ ಕಾರಣಕ್ಕೂ ಗೂಗಲ್ ಅನುವಾದವನ್ನು ಬಳಸುವುದಿಲ್ಲ. ನಮ್ಮ ಮೆಟ್ರೋದಲ್ಲಿ ಕರ್ನಾಟದವರಿಗೆ ಉದ್ಯೋಗ ನೀಡುವ ನಿಟ್ಟಿನಲ್ಲಿ ಗಮನಹರಿಸಲಾಗುವುದು ಮತ್ತು ಕನ್ನಡ ಭಾಷೆ, ಪರಂಪರೆಯನ್ನು ಹಂಚುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತೇವೆ ಮತ್ತು ಸಭೆಯಲ್ಲಿ ಚರ್ಚಿತವಾಗಿರುವ ಎಲ್ಲ ಲೋಪದೋಷಗಳನ್ನು ನವೆಂಬರ್ ಒಳಗೆ ಸರಿಪಡಿಸಿಕೊಂಡು ತಮಗೆ ವರದಿ ನೀಡವುದಾಗಿ ಭರವಸೆ ನೀಡಿದರು.

**ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಕೆ.ಮುರಳಿಧರ** ಅವರು ಪ್ರಾಧಿಕಾರದ ಜವಾಬ್ದಾರಿಗಳ ಬಗ್ಗೆ ಮಾಹಿತಿ ಹಂಚಿಕೊಂಡರು.

**ಮಾನ್ಯ ಮುಖ್ಯಮಂತ್ರಿಗಳ ಇ–ಆಡಳಿತ ಸಲಹೆಗಾರರಾದ ಬೇಳೂರು ಸುದರ್ಶನ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಕೆ.ಮುರಳಿಧರ, ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಡಾ.ವೀರಶೆಟ್ಟಿ, ವೆಬ್ ಪೋರ್ಟಲ್ ಯೋಜನಾಧಿಕಾರಿ ಸತೀಶ್, ನಮ್ಮ ಮೆಟ್ರೋ ವ್ಯವಸ್ಥಾಪಕ ನಿರ್ದೇಶಕರಾದ ಅಜಯ್ ಸೇಥ್, ನಿರ್ದೇಶಕರಾದ ಎನ್.ಎಂ.ದೋಕೆ, ಡಿ ರಾಧಾಕೃಷ್ಣ ರೆಡ್ಡಿ, ಕಾರ್ಯಕಾರಿ ನಿರ್ದೇಶಕರಾದ ಎ.ಎಸ್. ಶಂಕರ್, ಎಸ್.ಎಸ್. ಹೆಗರೆಡ್ಡಿ, ಎಂ.ಎಸ್. ಚನ್ನಪ್ಪ ಗೌಡರ್, ಬಿ.ಎಸ್. ಪತ್ರಿ, ಚೌವಾಣ್ ಬಿ.ಎಲ್.ವೈ** ಮತ್ತಿತರರು ಉಪಸ್ಥಿತರಿದ್ದರು.

ವಿಜಯವಾಣಿ ನಂ 1

# ನಮ್ಮ ಮೆಟ್ರೋದಲ್ಲಿ ಹಿಂದಿ ಭಾಷೆ ಹೇರಿಕೆ ಆಗಬಾರದು

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ನಮ್ಮ ಮೆಟ್ರೋದಲ್ಲಿ ಕನ್ನಡಕ್ಕೆ ಆದ್ಯತೆ ನೀಡಬೇಕೆ ಹೊರತು ಯಾವುದೇ ಕಾರಣಕ್ಕೂ ಹಿಂದಿ ಹೇರಿಕೆಯ ವಕ್ತಾರರಂತೆ ಕೆಲಸ ಮಾಡಬಾರದು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್. ನಾಗಾಭರಣ ಎಚ್ಚರಿಕೆ ನೀಡಿದ್ದಾರೆ. ನಮ್ಮ ಮೆಟ್ರೋದಲ್ಲಿ ಕನ್ನಡ ಅನುಷ್ಠಾನ ಕುರಿತು ಪ್ರಗತಿ ಪರಿಶೀಲನೆ ನಡೆಸಿದ ಅವರು, ಕನ್ನಡ ನಾಡು- ನುಡಿ, ಸಂಸ್ಕೃತಿ ಹಾಗೂ ಕನ್ನಡ ಸಾಹಿತಿಗಳ ಸಂದೇಶಗಳನ್ನು ಪ್ರಚಾರ ಮಾಡಬೇಕೆಂದು ಸೂಚಿಸಿದರು.

**» ನಾಗಾಭರಣ ಎಚ್ಚರಿಕೆ**

ಮೆಟ್ರೋ ಸಂಸ್ಥೆಯಲ್ಲಿ ಸ್ವಚ್ಛತಾ ಸಿಬ್ಬಂದಿ ಮತ್ತು ಭದ್ರತಾ ಸಿಬ್ಬಂದಿ ಅನ್ಯರಾಜ್ಯದವರಿರುವ ಬಗ್ಗೆ ದೂರುಗಳು ಬಂದಿವೆ. ಯಾವುದೇ ಕಾರಣಕ್ಕೂ ಇನ್ನುಮುಂದೆ ಹೀಗಾಗದಂತೆ ಎಚ್ಚರ ವಹಿಸಬೇಕು ಎಂದು ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಅಜಯ್ ಸೇಠ್ ಅವರಿಗೆ ನಾಗಾಭರಣ ಸ್ಪಷ್ಟ ನಿರ್ದೇಶನ ನೀಡಿದರು.

# ಮೆಟ್ರೋದಲ್ಲಿ ಕನ್ನಡಿಗರಿಗೆ ಆದ್ಯತೆ ನೀಡಿ: ಟಿ.ಎಸ್.ನಾಗಾಭರಣ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಮ್ಮ ಮೆಟ್ರೋ ನಿಗಮಕ್ಕೆ ಹೊರಗುತ್ತಿಗೆ ನೌಕರರನ್ನು ಒದಗಿಸುವ ಸಂಸ್ಥೆಗಳಿಗೆ ಕನ್ನಡಿಗರನ್ನೇ ಕರೆ ತರುವಂತೆ ಷರತ್ತು ವಿಧಿಸಬೇಕು. ಕನ್ನಡ ನಾಡಿನಲ್ಲಿ ಕನ್ನಡಿಗರಿಗೆ ಮೊದಲ ಆದ್ಯತೆ ಸಿಗುವಂತೆ ಮಾಡಬೇಕು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್.ನಾಗಾಭರಣ ಸೂಚನೆ ನೀಡಿದ್ದಾರೆ. ಬುಧವಾರ ವಿಡಿಯೋ ಸಂವಾದದ ಮೂಲಕ ನಮ್ಮ ಮೆಟ್ರೋ ನಿಗಮದ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಮ್ಮ ಮೆಟ್ರೋ ನಿಗಮದಲ್ಲಿ ಸ್ವಚ್ಛತಾ ಸಿಬ್ಬಂದಿ ಮತ್ತು ಭದ್ರತಾ ಸಿಬ್ಬಂದಿ ಅನ್ಯರಾಜ್ಯದವರೇ ಇರುವ ಕುರಿತು ಸಾಕಷ್ಟು ದೂರುಗಳು ಬಂದಿವೆ. ಉತ್ತರ ಕರ್ನಾಟಕ ಸೇರಿದಂತೆ ನಮ್ಮ ರಾಜ್ಯದ ಸಾಕಷ್ಟು ಜಿಲ್ಲೆಯ ಜನರಿಗೆ ಕೆಲಸವಿಲ್ಲದೆ ತೊಂದರೆಗೆ ಸಿಲುಕಿದ್ದಾರೆ. ಹೀಗಿರುವಾಗ ಅನ್ಯರಾಜ್ಯದವರಿಗೆ ಕೆಲಸ ನೀಡುವುದು ಸರಿಯಲ್ಲ. ಇನ್ನು ಮುಂದೆ ಕನ್ನಡಿಗರನ್ನು ಕಡೆಗಣಿಸದಂತೆ ಎಚ್ಚರ ವಹಿಸಬೇಕು ಎಂದು ನಮ್ಮ ಮೆಟ್ರೋ ನಿಗಮದ ವ್ಯವಸ್ಥಾಪಕ ನಿರ್ದೇಶಕ ಅಜಯ್ ಸೇಠ್ ಅವರಿಗೆ ಸೂಚಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಮೆಟ್ರೋ ನಿಗಮದ ವ್ಯವಸ್ಥಾಪಕ ನಿರ್ದೇಶಕ ಅಜಯ್ ಸೇಠ್, ಕರ್ನಾಟಕದವರಿಗೆ ಉದ್ಯೋಗ ನೀಡಲು ಗಮನಹರಿಸಲಾಗುವುದು. ಕನ್ನಡ ಭಾಷೆ, ಪರಂಪರೆ ಹಂಚುವ ನಿಟ್ಟಿನಲ್ಲಿ ಮೆಟ್ರೋ ಕಾರ್ಯನಿರ್ವಹಿಸಲಿದೆ. ಲೋಪದೋಷಗಳನ್ನು ನವೆಂಬರ್ ಒಳಗೆ ಸರಿಪಡಿಸಿಕೊಳ್ಳುತ್ತೇವೆ ಎಂದರು.



# ‘ಕನ್ನಡಿಗರ ಮೇಲೆ ಹಿಂದಿ ಹೇರಿಕೆ ಸಲ್ಲ’



ಬೆಂಗಳೂರು: ಮೆಟ್ರೋ ಸಂಸ್ಥೆಯು ಕನ್ನಡ ಸಂಸ್ಕೃತಿಯನ್ನು ಹರಡುವ ವಾಹಕವಾಗಬೇಕೇ ಹೊರತು ಹಿಂದಿಯನ್ನು ಹೇರುವ ವಕ್ತಾರರಾಗಬಾರದು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್. ನಾಗಾಭರಣ ಎಚ್ಚರಿಕೆ ನೀಡಿದರು.

ವಿಧಾನಸೌಧದಲ್ಲಿ ಬುಧವಾರ ನಡೆದ ಬೆಂಗಳೂರು ನಮ್ಮ ಮೆಟ್ರೊದಲ್ಲಿ ಕನ್ನಡ ಅನುಷ್ಠಾನ ಕುರಿತ ಅಂತರ್ಜಾಲ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಮೆಟ್ರೋದಲ್ಲಿ ತುರ್ತು ಸಂದರ್ಭದಲ್ಲಿ ಬಳಸುವ ಬಾಗಿಲುಗಳ ಮೇಲೆ ಸಂಪೂರ್ಣವಾಗಿ ಹಿಂದಿ ಬಳಸಲಾಗಿದೆ ಹಾಗೂ ಮೆಟ್ರೋ ನಾಮಫಲಕಗಳಲ್ಲಿ ಬಹಳಷ್ಟು ಕನ್ನಡದ ತಪ್ಪು ಪದಗಳನ್ನು ಬಳಸಲಾಗುತ್ತಿದೆ. ಈ ನಿಟ್ಟಿನಲ್ಲಿ ಗಮನ ಹರಿಸಿ ಸೂಕ್ತ ಅನುವಾದಕರ ಮೂಲಕ ಕನ್ನಡ ಪದಗಳನ್ನು ಬಳಸಬೇಕೆಂದು ಸೂಚನೆ ನೀಡಿದರು. ಮೆಟ್ರೋ ಸಂಸ್ಥೆಯಲ್ಲಿ ಅನ್ಯ ರಾಜ್ಯದವರಿಗೇ ಪ್ರಾಧಾನ್ಯತೆ ನೀಡಲಾಗುತ್ತಿದೆ. ನಮ್ಮ ರಾಜ್ಯದಲ್ಲಿ ಕೆಲಸವಿಲ್ಲದೆ ಸಾಕಷ್ಟು ಮಂದಿಯಿದ್ದು ಅವರಿಗೆ ಆದ್ಯತೆ ನೀಡಬೇಕು. ಕನ್ನಡಿಗರ ಮೇಲೆ ಹಿಂದಿ ಹೇರಿಕೆಯನ್ನು ಎಂದಿಗೂ ಸಹಿಸುವುದಿಲ್ಲ ಎಂದು ಬೆಂಗಳೂರು ಮೆಟ್ರೋದ ವ್ಯವಸ್ಥಾಪಕ ನಿರ್ದೇಶಕರಿಗೆ ಎಚ್ಚರಿಕೆ ನೀಡಿದರು.

ಸಂಯುಕ್ತ ಕರ್ನಾಟಕ